## ಕರ್ನಾಟಕ ಸರ್ಕಾರದ ನಡವಳಿಗಳು

508
21/4/2017

ವಿಷಯ: ವಾಡಿ–ಶಹಾಬಾದ್ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ(ಪ–1)ಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ನಅಇ:154:ಬೆಮುಪ್ರಾ:2007, ದಿ:25.07.2007.
2. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ: ನಗ್ರಾಯೋ(3)/ಗುವಿ/ ವಾಡಿ–ಶಹಾಬಾದ್/ ಮ.ಯೋ/ 2013–14ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ: 16.05.2015.

~ * ~

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ವಾಡಿ–ಶಹಾಬಾದ್ ಪಟ್ಟಣ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ವಾಡಿ–ಶಹಾಬಾದ್ ಯೋಜನಾ ಪ್ರಾಧಿಕಾರವು, ವಾಡಿ–ಶಹಾಬಾದ್ ಪಟ್ಟಣದ ಸ್ಥಳೀಯ ಯೊಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)(2) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿದೆ.

ವಾಡಿ–ಶಹಾಬಾದ್ ಪಟ್ಟಣದ ಜನಸಂಖ್ಯೆಯು 2021ರಲ್ಲಿ ವಾಡಿ 62,000 ಮತ್ತು ಶಹಾಬಾದ್ 1,15,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ. ವಾಡಿ–ಶಹಾಬಾದ್ ನಗರದ ಒಟ್ಟು 22,000 ಹೆಕ್ಟರ್ ಸ್ಥಳೀಯ ಯೋಜನಾ ಪ್ರದೇಶದಲ್ಲಿ ಒಟ್ಟು 3801 ಹೆಕ್ಟೇರ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರಗಳ ಮುಂದಿನ ಯೋಜಿತ ಬೆಳವಣಿಗೆಗಾಗಿ ವಿವಿಧ ಭೂ ಉಪಯೋಗಗಳಿಗಾಗಿ ಈ ಕೆಳಗಿನಂತೆ ವಿಸ್ತೀರ್ಣವನ್ನು ಪ್ರಸ್ತಾಪಿಸಲಾಗಿದೆ.

ವಾಡಿ: 1825 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 705.00 ಹೆಕ್ಟೇರ್ (ಶೇ.38.63), ವಾಣಿಜ್ಯಕ್ಕಾಗಿ 39.00 ಹೆಕ್ಟೇರ್ (ಶೇ.2.13), ಕೈಗಾರಿಕೆಗಾಗಿ 548.0 ಹೆಕ್ಟೇರ್, (ಶೇ.30.02), ಸಾರ್ವಜನಿಕ / ಅರೆ ಸಾರ್ವಜನಿಕ ಉಪಯೋಗಕ್ಕೆ 57.0 ಹೆಕ್ಟೇರ್, (ಶೇ.3.12) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 170.00 ಹೆಕ್ಟೇರ್ (ಶೇ.9.31) ಹಾಗೂ ಸಾರಿಗೆ/ ಸಂಪರ್ಕ ವಲಯಕ್ಕೆ 302.00 ಹೆಕ್ಟೇರ್ (ಶೇಕಡ 16.58), ನಾಗರೀಕ ಸೌಲಭ್ಯಕ್ಕಾಗಿ 4.00 ಹೆಕ್ಟೇರ್ (ಶೇ.0.21).

ಶಹಾಬಾದ್: 1976 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 1073.66 ಹೆಕ್ಟೇರ್ (ಶೇ.54.33), ವಾಣಿಜ್ಯಕ್ಕಾಗಿ 59.92 ಹೆಕ್ಟೇರ್ (ಶೇ.3.03), ಕೈಗಾರಿಕೆಗಾಗಿ 235.00 ಹೆಕ್ಟೇರ್, (ಶೇ.11.89), ಸಾರ್ವಜನಿಕ/ ಅರೆ ಸಾರ್ವಜನಿಕ ಉಪಯೋಗಕ್ಕೆ 78.00 ಹೆಕ್ಟೇರ್, (ಶೇ.3.94) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 255 ಹೆಕ್ಟೇರ್ (ಶೇ.12.90) ಹಾಗೂ ಸಾರಿಗೆ/ ಸಂಪರ್ಕ ವಲಯಕ್ಕೆ 267.85 ಹೆಕ್ಟೇರ್ (ಶೇಕಡ 13.58), ನಾಗರೀಕ ಸೌಲಭ್ಯಕ್ಕಾಗಿ 6.57ಹೆಕ್ಟೇರ್ (ಶೇ.0.33) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು



21/4/17

ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 118 ಗುಅಪ್ರಾ 2015, ಬೆಂಗಳೂರು, ದಿನಾಂಕ: 20.04.2017**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕಲಬುರಗಿ ಜಿಲ್ಲೆ, ವಾಡಿ-ಶಹಾಬಾದ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆ (ಪ-1)ಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆ (ಪ-1)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಷರತ್ತು:

- ಈ ಆದೇಶದ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ.

ಗೆ,
ಸಂಕಲನಾಧಿಕಾರಿ, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ರವರು 100 ಪ್ರತಿಗಳನ್ನು ವಿಶೇಷ ರಾಜ್ಯ ಪತ್ರದಲ್ಲಿ ಮುದ್ರಿಸಿ, 50 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರಿಗೆ ಹಾಗೂ 50 ಪ್ರತಿಗಳನ್ನು ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ ಇವರಿಗೆ ಕಳುಹಿಸುವಂತೆ ಕೋರಲಾಗಿದೆ.

ಪ್ರತಿಯನ್ನು:

1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
2. ಜಿಲ್ಲಾಧಿಕಾರಿ, ಕಲಬುರಗಿ ಜಿಲ್ಲೆ, ಕಲಬುರಗಿ.
3. ಸದಸ್ಯ ಕಾರ್ಯದರ್ಶಿ, ವಾಡಿ-ಶಹಾಬಾದ್ ಯೋಜನಾ ಪ್ರಾಧಿಕಾರ, ವಾಡಿ-ಶಹಾಬಾದ್ ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
4. ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ, ಕಲಬುರಗಿ ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಪೌರಾಯುಕ್ತರು, ನಗರಸಭೆ, ಶಹಾಬಾದ್ ಮತ್ತು ಮುಖ್ಯಾಧಿಕಾರಿ, ಪುರಸಭೆ, ವಾಡಿ ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
6. ಕರ್ನಾಟಕ ರಾಜ್ಯ ಪತ್ರ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.